ದಿ: 11/08/2025
1568ಕ್ಕೆ ನಿ-330 = (40)

(1)

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ. ಸಿ.ಎನ್‌ಮಂಜೇಗೌಡ, ಇವರು ನಿಯಮ 330 ರಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ

**ಸೂಚನೆ:** ರಾಜ್ಯಾದ್ಯಂತ ಎಲ್ಲೆಲ್ಲಿ ಅಕ್ರಮ ಬಡಾವಣೆಗಳು ನಿರ್ಮಾಣಗೊಂಡಿವೆ: (ಅಂಕಿ ಅಂಶಗಳ ಸಹಿತ ಜಿಲ್ಲಾವಾರು ಮಾಹಿತಿ ನೀಡುವುದು) ಮತ್ತು ಈ ಅಕ್ರಮ ಬಡಾವಣೆ ನಿರ್ಮಾಣದ ಬಗ್ಗೆ ಮಾಹಿತಿ ನೀಡದ ಮತ್ತು ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಇಲಾಖಾ ಮಟ್ಟದಲ್ಲಿ ಕೈಗೊಂಡ ಕ್ರಮಗಳು ಹಾಗೂ ಈ ಅಕ್ರಮ ಬಡಾವಣೆ ನಿರ್ಮಾಣ ತಡೆಯಲು ಸರ್ಕಾರ ಕೈಗೊಂಡ ಕಾನೂನು ಕ್ರಮಗಳ ಬಗ್ಗೆ ನಿಯಮ 330 ರಡಿಯಲ್ಲಿ ಮಾನ್ಯ ನಗರಾಭಿವೃದಿ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

### ಉತ್ತರ

ರಾಜ್ಯದಲ್ಲಿ ನಿರ್ಮಾಣವಾಗಿರುವ ಅಕ್ರಮ ಬಡಾವಣೆಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಅನಧಿಕೃತ ಬಡಾವಣೆಗಳನ್ನು ತಡೆಗಟ್ಟುವ ಸಂಬಂಧ ಹಾಗೂ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ನ್ನು ಉಲ್ಲಂಘಿಸಿ, ಗ್ರಾಮ ಪಂಚಾಯಿತಿಗಳಿಂದ/ನಗರ ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಅನುಮೋದಿಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಕೆ ಉಲ್ಲಂಘನೆಯಾಗದಂತೆ ಸರ್ಕಾರವು ಆದೇಶ ಸಂಖ್ಯೆ: ನಅಇ 93 ಎಂಡಬ್ಲ್ಯೂಪಿ 2023 (ಭಾ-1), ದಿನಾಂಕ:09-01-2024 ರಲ್ಲಿ ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 93 ಎಂಡಬ್ಲ್ಯೂಪಿ 2023 (ಭಾ-1), ದಿನಾಂಕ:28-08-2024 ರಂದು ವಿನ್ಯಾಸ ಅನುಮೋದನೆಗೆ ಕ್ರಮವಹಿಸುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ (ಪ್ರತಿ ಲಗತ್ತಿಸಿದೆ).

ಮೇಲ್ಕಂಡ ಮಾರ್ಗಸೂಚಿಗಳಂತೆ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿದಾರರು ವಿನ್ಯಾಸ ಅನುಮೋದನೆ ಪಡೆಯದೆ ಬಡಾವಣೆ ರೂಪಿಸಿದರೆ, ಅದು ಅನಧಿಕೃತವೆಂದು ಪರಿಗಣಿಸಲಾಗುತ್ತದೆ. ಅವುಗಳಿಗೆ ಸ್ಥಳೀಯ ಸಂಸ್ಥೆಗಳಲ್ಲಿ ಖಾತೆ ತೆರೆಯದಂತೆ ನಿರ್ಭಂಧ ವಿಧಿಸಲಾಗಿದೆ. ಅಲ್ಲದೇ, ಅತಂಹ ಬಡಾವಣೆಗಳಲ್ಲಿನ ನಿವೇಶನಗಳಿಗೆ ಕಟ್ಟಡ ರಹದಾರಿಯನ್ನು ನೀಡಲು ಅವಕಾಶವಿರುವುದಿಲ್ಲ.

ಅನಧಿಕೃತ ಬಡಾವಣೆಗಳ ನಿರ್ಮಾಣ ತಡೆಗಟ್ಟಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(4) ರಲ್ಲಿ If any person does any work in contravention of sub-section (1) or in contravention of the modifications and conditions of the sanction granted under sub-section (2) or despite refusal for the sanction under the said sub-section (2), the Planning Authority may direct such person by notice in writing to stop any work in progress and after making an inquiry in the prescribed manner, remove or pull down any work or restore the land to its original condition ಎಂದು ಉಲ್ಲೇಖಿಸಿದ್ದು, ಅದರಂತೆ ಪ್ರಾಧಿಕಾರಗಳು ಅನಧಿಕೃತ ಬಡಾವಣೆಗಳನ್ನು ತಡೆಗಟ್ಟಲು ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ.

ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ಯೋಜನಾ ಪ್ರಾಧಿಕಾರಗಳ ವ್ಯಾಪ್ತಿಯಲ್ಲಿ ಕಾಯ್ದೆ/ ನಿಯಮಗಳನ್ನು ಉಲ್ಲಂಘಿಸಿ ಅನಧಿಕೃತ ಅಭಿವೃದ್ಧಿ / ಬೆಳವಣಿಗೆಗಳನ್ನು ತಡೆಗಟ್ಟಲು ವಿಫಲರಾದ ಸಂಬಂಧಿಸಿದ ಪ್ರಾಧಿಕಾರಗಳ ಅಧಿಕಾರಿಗಳಿಗೆ ಸೂಕ್ತ ದಂಡನೆ ವಿಧಿಸಲು KTCP ಕಾಯ್ದೆ 1961ರ ಕಲಂ 76FFF "Penalty against jurisdictional officer failing to prevent unauthorized deviations or constructions" ರಡಿಯಲ್ಲಿ The Karnataka Planning Authority (levy of penalty on jurisdictional officer for failure to prevent unauthorized development)Rules, 2021ರ ನಿಯಮಗಳನ್ನು ರೂಪಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 03 ಟಿಟಿಪಿ 2020(ಇ) ದಿನಾಂಕ:08.04.2025 ನ್ನು ಹೊರಡಿಸಲಾಗಿದೆ.

ಕಡತ ಸಂಖ್ಯೆ: ನಅಇ 249 ಬೆಮಪ್ರಾ 2025(ಇ)

(ಬಿ.ಎಸ್.ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

## ಅನುಬಂಧ

### ರಾಜ್ಯದಲ್ಲಿನ ನಗರಾಭಿವೃದ್ಧಿ ಪ್ರಾಧಿಕಾರಗಳು
### (ಬಿ.ಡಿ.ಎ. ಮತ್ತು ಬಿ.ಎಂ.ಆರ್.ಡಿ.ಎ. ವ್ಯಾಪ್ತಿ ಹೊರತುಪಡಿಸಿ)

| ಕ್ರ. ಸಂ. | ನಗರಾಭಿವೃದ್ಧಿ ಪ್ರಾಧಿಕಾರಗಳು | ಅಕ್ರಮ ಬಡಾವಣೆಗಳ ಸಂಖ್ಯೆ | ಅಕ್ರಮ ಬಡಾವಣೆ ತಡೆಯಲು ಕೈಗೊಂಡ ಕ್ರಮ |
|---|---|---|---|
| 1. | ಬಾಗಲಕೋಟೆ | - | ಯಾವುದು ಇರುವುದಿಲ್ಲ |
| 2. | ಬೆಳಗಾವಿ | 23 | ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಅಕ್ರಮ ಬಡಾವಣೆಗಳಿಗೆ ತೆರವುಗೊಳಿಸಲು ನೋಟೀಸ್ ನೀಡಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳನ್ನು ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 3. | ಬಳ್ಳಾರಿ | 26 | ಅನಧಿಕೃತ ಬಡಾವಣೆಗಳನ್ನು ನಿರ್ಮಾಣ ಮಾಡದಂತೆ ಹಾಗೂ ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಸಾರ್ವಜನಿಕರು ಖರೀದಿ ಮಾಡದೇ ಇರಲು ಪತ್ರಿಕಾ ಪ್ರಕಟಣೆಯನ್ನು ಕಾಲಕಾಲಕ್ಕೆ ಹೊರಡಿಸಲಾಗಿರುತ್ತದೆ. |
| 4. | ಬೀದರ್ | 69 | ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅಂತಹ ಅನಧಿಕೃತ ಬಡಾವಣೆಗಳ ಮಾಲೀಕರುಗಳಿಗೆ ನೋಟೀಸು ಜಾರಿ ಮಾಡಿ ನಿವೇಶನಗಳ ನೋಂದಣಿ ಮತ್ತು ಆಸ್ತಿ ವರ್ಗಾವಣೆ ಮಾಡುವುದನ್ನು ತಡೆಹಿಡಿಯಲು ಉಪನೋಂದಣಾಧಿಕಾರಿಗಳು, ಬೀದರ ಹಾಗೂ ಸ್ಥಳೀಯ ಸಂಸ್ಥೆಗಳಾದ ನಗರಸಭೆ ಮತ್ತು ಗ್ರಾಮ ಪಂಚಾಯತಿಗಳಿಗೆ ಪತ್ರ ಬರೆಯಲಾಗಿದೆ. |
| 5. | ವಿಜಯಪುರ | 216 | ಅನಧಿಕೃತ ಬಡಾವಣೆಗಳಲ್ಲಿ ನಿವೇಶನಗಳನ್ನು ಖರೀದಿ ಮಾಡುವುದಾಗಲಿ ನಿವೇಶನಗಳಲ್ಲಿ ಕಟ್ಟಡ ಕಟ್ಟುವುದಾಗಲೀ ಹಾಗೂ ನಿವೇಶಗಳನ್ನು ಮಾರಾಟ ಮಾಡುವುದಾಗಲಿ & ಶೇತ್ಕಿ ಜಮೀನುಗಳಲ್ಲಿ ಗುಂಟಾ ನಿವೇಶನ ರಚಿಸಿ ಪರಭಾರೆ ಮಾಡಬಾರದೆಂದು ಪತ್ರಿಕಾ ಪ್ರಕಟಣೆ ಮೂಲಕ ಸಾರ್ವಜನಿಕರಿಗೆ ತಿಳಿಸಲಾಗಿದೆ.<br><br>ಆಯುಕ್ತರು, ಮಹಾನಗರಪಾಲಿಕೆ, ವಿಜಯಪುರ ರವರಿಗೆ ಅನಧೀಕೃತ ಗುಂಟಾ ನಿವೇಶಗಳನ್ನು ಮತ್ತು ಅನಧೀಕೃತ ತುಂಡು ಜಮೀನುಗಳಾಗಿ ಪರಿವರ್ತಿಸುತ್ತಿರುವ ಬಗ್ಗೆ ಪಹಣಿ ಪತ್ರಿಕೆಯಲ್ಲಿ ದಾಖಲು ಮಾಡದಿರಲು, ಖಾತಾ ತೆರೆಯದಿರಲು, ಸರ್ವೆ ನಕ್ಷೆಗಳನ್ನು ತಯಾರಿಸದಿರಲು ಹಾಗೂ ಅನಧೀಕೃತ ನಿವೇಶಗಳನ್ನು ನೊಂದಣಿ ಮಾಡದಿರಲು ತಿಳಿಸಲಾಗಿರುತ್ತದೆ. |
| 6. | ಚಾಮರಾಜನಗರ -ರಾಮಸಮುದ್ರ | - | ಯಾವುದು ಇರುವುದಿಲ್ಲ. |
| 7. | ಚಿಕ್ಕಮಗಳೂರು | - | ಯಾವುದು ಇರುವುದಿಲ್ಲ. |
| 8. | ಚಿತ್ರದುರ್ಗ | 19 | ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಖರೀದಿಸಬಾರದೆಂದು ದಿನಾಂಕ:06.08.2023 ರಂದು ಸಾರ್ವಜನಿಕ ಪ್ರಕಟಣೆ ನೀಡಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳನ್ನು |

| | | | |
|---|---|---|---|
| | | | ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 9. | ಚಿಕ್ಕಬಳ್ಳಾಪುರ | 11 | ಅನಧಿಕೃತ ಬಡಾವಣೆಗಳ ಖಾತೆ ರದ್ದು ಪಡಿಸಲು ಸ್ಥಳೀಯ ಸಂಸ್ಥೆಗೆ ಪತ್ರ ಬರೆಯಲಾಗಿದೆ. |
| 10. | ದಾವಣಗೆರೆ-ಹರಿಹರ | - | ಯಾವುದು ಇರುವುದಿಲ್ಲ. |
| 11. | ಗದಗ-ಬೆಟಗೇರಿ | - | ಯಾವುದು ಇರುವುದಿಲ್ಲ |
| 12. | ಕಲಬುರಗಿ | 110 | ಪ್ರಾಧಿಕಾರದಿಂದ ಅನಧಿಕೃತ ಬಡಾವಣೆಗಳ ಮಾಲೀಕರಿಗೆ ನೋಟಿಸ್ ನೀಡಲಾಗಿದೆ ಹಾಗೂ 12 ಅನಧಿಕೃತ ವಿನ್ಯಾಸದ ಮಾಲೀಕರ ವಿರುದ್ಧ ಪ್ರಾಧಿಕಾರದಿಂದ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲಾಗಿದೆ. |
| 13. | ಹಾಸನ | - | ಯಾವುದು ಇರುವುದಿಲ್ಲ. |
| 14. | ಹಾವೇರಿ | 22 | ಈ ಬಗ್ಗೆ ಭೂಮಾಲೀಕರುಗಳಿಗೆ ಅಕ್ರಮ ಬಡಾವಣೆ ತೆರವುಗೊಳಿಸಲು ನೋಟೀಸ್ ನೀಡಲಾಗಿದ್ದು, ಕಂದಾಯ ಇಲಾಖೆ, ಸ್ಥಳೀಯ ಸಂಸ್ಥೆಗೆ ಅಕ್ರಮ ಬಡಾವಣೆ ತೆರವುಗೊಳಿಸಲು ಕ್ರಮವಹಿಸಲು ಪತ್ರ ಬರೆಯಲಾಗಿದೆ. |
| 15. | ಹೊಸಪೇಟೆ | 5 | ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಖರೀದಿಸಬಾರದೆಂದು ಪ್ರಾಧಿಕಾರದಿಂದ ನೋಟೀಸ್ ನೀಡಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳನ್ನು ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 16. | ಹುಬ್ಬಳ್ಳಿ-ಧಾರವಾಡ | 163 | 163 ಅನಧಿಕೃತ ಬಡಾವಣೆಗಳ ಪೈಕಿ 102 ಬಡಾವಣೆಗಳನ್ನು ತೆರವುಗೊಳಿಸಲಾಗಿರುತ್ತದೆ. ಉಳಿದ ಅನಧಿಕೃತ ಬಡಾವಣೆಗಳನ್ನು ತೆರವುಗೊಳಿಸಲು ನೋಟೀಸ್ ಜಾರಿ ಮಾಡಲಾಗಿದೆ. |
| 17. | ಕಾರವಾರ | - | ಯಾವುದು ಇರುವುದಿಲ್ಲ. |
| 18. | ಕೆ.ಜಿ.ಎಫ್. | 32 | ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಖರೀದಿಸಬಾರದೆಂದು ಪ್ರಾಧಿಕಾರದಿಂದ ನೋಟೀಸ್ ನೀಡಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳನ್ನು ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 19. | ಕೋಲಾರ | 2 | ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಖರೀದಿಸಬಾರದೆಂದು ಪ್ರಾಧಿಕಾರದಿಂದ ನೋಟೀಸ್ ನೀಡಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳನ್ನು ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 20. | ಕೊಪ್ಪಳ | - | ಯಾವುದು ಇರುವುದಿಲ್ಲ. |
| 21. | ಮಡಿಕೇರಿ | - | ಯಾವುದು ಇರುವುದಿಲ್ಲ. |
| 22. | ಮಂಡ್ಯ | 3 | ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಖರೀದಿಸಬಾರದೆಂದು ಪ್ರಾಧಿಕಾರದಿಂದ ನೋಟೀಸ್ ನೀಡಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳನ್ನು ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 23. | ಮಂಗಳೂರು | - | ಯಾವುದು ಇರುವುದಿಲ್ಲ. |
| 24. | ಮೈಸೂರು | - | ಮೈಸೂರು ಅಭಿವೃದ್ಧಿ ಪ್ರಾಧಿಕಾರದಿಂದ ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಪರಿವರ್ತನೆಗೊಳ್ಳದೇ ಇರುವ |

| | | | |
|---|---|---|---|
| | | | ಜಮೀನಿನಲ್ಲಿ ನಿರ್ಮಾಣವಾಗಿರುವ ಕಂದಾಯ ಬಡಾವಣೆಗಳ ಮಾಹಿತಿ ನೀಡುವಂತೆ ತಹಶೀಲ್ದಾರ್, ಮೈಸೂರು ಜಿಲ್ಲೆ ಇವರಿಗೆ ಪತ್ರ ಬರೆಯಲಾಗಿದೆ.<br><br>ಅನಧಿಕೃತ ಬಡಾವಣೆಗಳ ನಿರ್ಮಾಣ ತಡೆಗಟ್ಟಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 25. | ರಾಯಚೂರು | - | ಯಾವುದು ಇರುವುದಿಲ್ಲ. |
| 26. | ಶಿವಮೊಗ್ಗ-ಭದ್ರಾವತಿ | - | ಯಾವುದು ಇರುವುದಿಲ್ಲ. |
| 27. | ತುಮಕೂರು | 52 | ತುಮಕೂರು ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಬರುವ ಅನಧಿಕೃತ ಬಡಾವಣೆಗಳಲ್ಲಿ ಸಾರ್ವಜನಿಕರು ನಿವೇಶನಗಳನ್ನು ಕ್ರಯಕ್ಕೆ ಪಡೆಯಬಾರದೆಂದು ಹಾಗೂ ಜಮೀನಿನ ಮಾಲೀಕರು / ಅಭಿವೃದ್ಧಿದಾರರು ಪ್ರಾಧಿಕಾರದಿಂದ ಅನುಮೋದನೆ ಪಡೆಯದೇ ಬಡಾವಣೆಗಳನ್ನು ನಿರ್ಮಿಸಬಾರದೆಂದು ಮತ್ತು ಅಕ್ರಮ ಬಡಾವಣೆಗಳು ಅಭಿವೃದ್ಧಿಪಡಿಸುತ್ತಿರುವುದು ಕಂಡುಬಂದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ ಮತ್ತು ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆಯಂತೆ ಕಾನೂನು ಕ್ರಮಜರುಗಿಸಲಾಗುವುದೆಂದು ದಿನಪತ್ರಿಕೆಗಳಲ್ಲಿ ದಿನಾಂಕ 30-10-2021 ಹಾಗೂ 12-07-2023 ರಂದು ಸಾರ್ವಜನಿಕ ಪ್ರಕಟಣೆ ನೀಡಲಾಗಿರುತ್ತದೆ.<br><br>ಸ್ಥಳೀಯ ಸಂಸ್ಥೆಗಳಿಗೆ ದಿನಾಂಕ 17-11-2021, 30-111-2021 ಮತ್ತು 13-07-2023 ರಂದು ಪತ್ರಗಳನ್ನು ಬರೆದು ಅಕ್ರಮ ಬಡಾವಣೆಗಳಲ್ಲಿನ ನಿವೇಶನಗಳ ಖಾತಾ ರದ್ದುಪಡಿಸಲು ಹಾಗೂ ನಿಯಮಾನುಸಾರ ತೆರವುಗೊಳಿಸಲು ತಿಳಿಸಲಾಗಿದೆ. |
| 28. | ಉಡುಪಿ-ಮಲ್ಪೆ | - | ಯಾವುದು ಇರುವುದಿಲ್ಲ. |
| 29. | ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ತೋರಣಗಲ್ಲು | 18 | ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಖರೀದಿಸಬಾರದೆಂದು ಪ್ರಾಧಿಕಾರದಿಂದ ನೋಟೀಸ್ ನೀಡಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳನ್ನು ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 30. | ಯಾದಗಿರಿ | - | ಯಾವುದು ಇರುವುದಿಲ್ಲ |
| 31. | ರಾಣೇಬೆನ್ನೂರು | 22 | ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಖರೀದಿಸಬಾರದೆಂದು ಪ್ರಾಧಿಕಾರದಿಂದ ನೋಟೀಸ್ ನೀಡಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳನ್ನು ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 32. | ಸಿಂಧನೂರು | - | ಯಾವುದು ಇರುವುದಿಲ್ಲ |
| 33. | ಶಿರಾ | - | ಯಾವುದು ಇರುವುದಿಲ್ಲ |

## ರಾಜ್ಯದಲ್ಲಿನ ಯೋಜನಾ ಪ್ರಾಧಿಕಾರಗಳು
## (ಬಿ.ಡಿ.ಎ. ಮತ್ತು ಬಿ.ಎಂ.ಆರ್.ಡಿ.ಎ. ವ್ಯಾಪ್ತಿ ಹೊರತುಪಡಿಸಿ)

| ಕ್ರ. ಸಂ. | ಯೋಜನಾ ಪ್ರಾಧಿಕಾರಗಳು | ಅಕ್ರಮ ಬಡಾವಣೆಗಳಸಂಖ್ಯೆ | ಅಕ್ರಮ ಬಡಾವಣೆ ತಡೆಯಲು ಕೈಗೊಂಡ ಕ್ರಮ |
|---|---|---|---|
| 1 | ಅರಕಲಗೂಡು | - | ಯಾವುದು ಇರುವುದಿಲ್ಲ. |
| 2 | ಅರಸೀಕೆರೆ | - | |
| 3 | ಬಾದಾಮಿ | - | |
| 4 | ಬಂಟ್ವಾಳ | - | |
| 5 | ಕುಂದಾಪುರ | - | |
| 6 | ಬೇಲೂರು-ಹಳೇಬೀಡು | - | |
| 7 | ಚನ್ನರಾಯಪಟ್ಟಣ | - | |
| 8 | ಚಿಂತಾಮಣಿ | - | |
| 9 | ಚಿತ್ತಾಪೂರ | - | |
| 10 | ಗಂಗಾವತಿ | - | |
| 11 | ಗೋಕಾಕ | - | |
| 12 | ಗೌರಿಬಿದನೂರು | - | |
| 13 | ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ | - | |
| 14 | ಇಲಕಲ್ಲ | - | |
| 15 | ಜಮಖಂಡಿ | - | |
| 16 | ಕಾಪು | - | |
| 17 | ಕೃಷ್ಣರಾಜನಗರ | - | |
| 18 | ಬಸವಕಲ್ಯಾಣ | 153 | ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳನ್ನು ಖರೀದಿಸಬಾರದೆಂದು ಪ್ರಾಧಿಕಾರದಿಂದ ನೋಟೀಸ್ ನೀಡಲು ಹಾಗೂ ಅನಧಿಕೃತ ಬಡಾವಣೆಗಳನ್ನು ನಿಯಂತ್ರಿಸಲು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17(4) ರನ್ವಯ ಕ್ರಮವಹಿಸಲಾಗುತ್ತಿದೆ. |
| 19 | ಕುಶಾಲನಗರ | 2 | ಕುಶಾಲನಗರ ಯೋಜನಾ ಪ್ರಾಧಿಕಾರದಿಂದ ಅನಧಿಕೃತ ಬಡಾವಣೆಗಳ ಮಾಲೀಕರಿಗೆ ನೋಟೀಸ್ ನೀಡಲಾಗಿದ್ದು, ಹಾಗೂ ಅನಧಿಕೃತ ಬಡಾವಣೆಗಳ ನಿವೇಶನಗಳಿಗೆ ಖಾತೆ ಮಾಡದಂತೆ, ಸ್ಥಳೀಯ ಸಂಸ್ಥೆಗೆ ಮತ್ತು ನಿವೇಶನಗಳನ್ನು ನೋಂದಣಿ ಮಾಡದಂತೆ ಉಪನೋಂದಣಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ ಹಾಗೂ ಅನಧಿಕೃತ ಬಡಾವಣೆಗಳ ನಿವೇಶನಗಳಲ್ಲಿ ಕಟ್ಟಡ ನಿರ್ಮಿಸಲು ಪ್ರಾಧಿಕಾರದಿಂದ ತಾಂತ್ರಿಕ ಅಭಿಪ್ರಾಯ ನೀಡುತ್ತಿಲ್ಲ. |
| 20 | ಲಿಂಗಸುಗೂರು | - | ಯಾವುದು ಇರುವುದಿಲ್ಲ. |
| 21 | ಕುಣಿಗಲ್ | - | |
| 22 | ಮಾಲೂರು | - | |
| 23 | ಮೂಡಬಿದ್ರೆ | - | |
| 24 | ನಿಪ್ಪಾಣಿ | - | |
| 25 | ಪುತ್ತೂರು | - | |
| 26 | ರಾಮದುರ್ಗ | - | |
| 27 | ರಬಕವಿ-ಬನಹಟ್ಟಿ | - | |

| | | | |
|---|---|---|---|
| 28 | ಶಹಾಪೂರ | - | |
| 29 | ಸೂರಾಪುರ | - | |
| 30 | ಶಿರಸಿ | - | |
| 31 | ವಾಡಿ-ಶಹಾಬಾದ | 15 | ಅನಧಿಕೃತ ಬಡಾವಣೆಗಳ ನಿವೇಶನಗಳ ನೋಂದಣಿ ಮತ್ತು ಆಸ್ತಿ ವರ್ಗಾವಣೆ ಮಾಡುವುದನ್ನು ತಡೆಹಿಡಿಯಲು ಉಪ ನೋಂದಣಾಧಿಕಾರಿಗಳು ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಪತ್ರ ಬರೆಯಲಾಗಿದೆ. |
| 32 | ಸೇಡಂ | 3 | - |
| 33 | ಶಿಡ್ಲಘಟ್ಟ | - | ಯಾವುದು ಇರುವುದಿಲ್ಲ |
| 34 | ತಿಪಟೂರು | - | |
| 35 | ಹುಣಸೂರು | - | |
| 36 | ಮುಧೋಳ | - | |
| 37 | ಮಾನ್ವಿ | - | |
| 38 | ಮಳವಳ್ಳಿ | - | |
| 39 | ಚೆನ್ನೈ-ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್ | - | |
| 40 | ಸೋಮವಾರಪೇಟೆ | - | |
| 41 | ಸಾಗರ | - | |
| 42 | ಸಿಂಧಗಿ | - | |

ಕರ್ನಾಟಕ ಸರ್ಕಾರದ ನಡವಳಿಗಳು

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಚೇರಿ ಬೆಂಗಳೂರು ಕ್ರಮ ಸಂಖ್ಯೆ 7167508 ದಿನಾಂಕ 17/1/24

**ವಿಷಯ:** ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿಗಳಿಂದ / ನಗರ ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಅನುಮೋದಿಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ.

**ಓದಲಾಗಿದೆ:** ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ: 19033/2023 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ನೀಡಿರುವ ದೈನಂದಿನ ಆದೇಶ.

**ಪ್ರಸ್ತಾವನೆ:**

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ: 19033/2023 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ನೀಡಿರುವ ದೈನಂದಿನ ಆದೇಶದಲ್ಲಿ, ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿಯಿಂದ / ನಗರ ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಮಂಜೂರಾಗಿದ್ದು, ಇದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 ರಲ್ಲಿ ಕಲ್ಪಿಸಿರುವ ಅವಕಾಶಕ್ಕೆ ವ್ಯತಿರಿಕ್ತವಾಗಿರುತ್ತದೆ. ಈ ಅನುಮೋದನೆಯ ವಿರುದ್ಧ ದೂರು ಸ್ವೀಕರಿಸಿದ ಹಿನ್ನೆಲೆಯಲ್ಲಿ ವಿನ್ಯಾಸ ನಕ್ಷೆ ಮತ್ತು ಖಾತೆಗಳನ್ನು ರದ್ದುಗೊಳಿಸಿ ಆದೇಶಿಸಲಾಗಿರುತ್ತದೆ. ಇದು, ಮೂರನೇ ವ್ಯಕ್ತಿಯ / ಖರೀದಿದಾರರ ಹಿತಾಸಕ್ತಿಗಳನ್ನು ಒಳಗೊಂಡಿದ್ದು, ಅನಾವಶ್ಯಕ ವಿವಾದಗಳಿಗೆ ಕಾರಣವಾಗುವುದರಿಂದ, ಇಂತಹ ಸಮಸ್ಯೆಗಳನ್ನು ನಿಯಂತ್ರಿಸಲು ಒಂದು ರೂಪರೇಷೆಗಳನ್ನು ರಚಿಸಲು ಮಾನ್ಯ ಉಚ್ಚ ನ್ಯಾಯಾಲಯವು ಸೂಚಿಸಿರುತ್ತದೆ. ಮುಂದುವರೆದು, ಇಂತಹ ಪ್ರಕರಣಗಳು ಭವಿಷ್ಯದಲ್ಲಿ ಪುನರಾವರ್ತಿಯಾಗದಂತೆ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರದ ವಿವರಣೆ ನೀಡುವಂತೆ ಸೂಚಿಸಿರುತ್ತದೆ.

16/1/2024

ಆದುದರಿಂದ, ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ನೀಡಿರುವ ದೈನಂದಿನ ಆದೇಶದನ್ವಯ ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 22.12.2023 ರಂದು, ಸಂಬಂಧಪಟ್ಟ ಇಲಾಖೆಗಳೊಂದಿಗೆ ನಡೆದ ಸಮಾಲೋಚನಾ ಸಭೆಯಲ್ಲಿ ಇಂತಹ ಪ್ರಕರಣಗಳನ್ನು ನಿಯಂತ್ರಿಸುವ ಕುರಿತು ಸುದೀರ್ಘವಾಗಿ ಚರ್ಚಿಸಲಾಗಿದೆ. ಸದರಿ ಸಭೆಯಲ್ಲಿ ಚರ್ಚಿಸಿ ಕೈಗೊಂಡ ನಿರ್ಣಯದಂತೆ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 93 ಎಂಡಬ್ಲ್ಯೂಪಿ 2023 (ಭಾ-1), ದಿನಾಂಕ: 09.01.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿಗಳಿಂದ / ನಗರ ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಅನುಮೋದಿಸುತ್ತಿರುವುದನ್ನು ತಡೆಗಟ್ಟಲು ಈ ಕೆಳಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪರಿಪಾಲಿಸುವಂತೆ ಕ್ರಮವಹಿಸಲು ಆದೇಶಿಸಿದೆ.

TP-5 17/1/24

1. ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ರಿಟ್ ಅರ್ಜಿ ಸಂಖ್ಯೆ: 19033/2023 ಪ್ರಕರಣದಲ್ಲಿ ನೀಡಿರುವ ದೈನಂದಿನ ಆದೇಶದಲ್ಲಿ, ಗ್ರಾಮ ಪಂಚಾಯತಿಗಳು ತಮ್ಮ ಅಧಿಕಾರ ವ್ಯಾಪ್ತಿ ಇಲ್ಲದಿದ್ದರೂ ಸಹಾ ವಿನ್ಯಾಸಗಳಿಗೆ ಅನುಮೋದನೆ ನೀಡುತ್ತಿರುವುದನ್ನು ತಡೆಗಟ್ಟಲು ಆದೇಶಿಸಿರುತ್ತದೆ. ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 ರಡಿಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳು / ಯೋಜನಾ ಪ್ರಾಧಿಕಾರಗಳು ವಿನ್ಯಾಸ ಅನುಮೋದಿಸಲು ಸಕ್ಷಮ ಪ್ರಾಧಿಕಾರಗಳಾಗಿರುತ್ತವೆ. ನಗರಾಭಿವೃದ್ಧಿ ಪ್ರಾಧಿಕಾರಗಳು / ಯೋಜನಾ ಪ್ರಾಧಿಕಾರಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತಿಗಳು / ನಗರ ಸ್ಥಳೀಯ ಸಂಸ್ಥೆಗಳು ವಿನ್ಯಾಸ ಅನುಮೋದನೆ ನೀಡತಕ್ಕದ್ದಲ್ಲ.

2. ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿ ಇತರೆ ಪ್ರದೇಶಗಳಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 4-K ರ ಅವಕಾಶದಂತೆ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಅಥವಾ ಅಧಿಕೃತ ಅಧಿಕಾರಿಯು ವಿನ್ಯಾಸ ಅನುಮೋದಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತಾರೆ. ಇಂತಹ ಪ್ರದೇಶಗಳಲ್ಲಿ ಗ್ರಾಮ ಪಂಚಾಯತಿಗಳು / ನಗರ ಸ್ಥಳೀಯ ಸಂಸ್ಥೆಗಳು ವಿನ್ಯಾಸ ಅನುಮೋದನೆ ನೀಡತಕ್ಕದ್ದಲ್ಲ.
3. ಗ್ರಾಮ ಪಂಚಾಯಿತಿಗಳು / ನಗರ ಸ್ಥಳೀಯ ಸಂಸ್ಥೆಗಳು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರಡಿಯಲ್ಲಿ ಯೋಜನಾ ಪ್ರಾಧಿಕಾರ / ನಗರಾಭಿವೃದ್ಧಿ ಪ್ರಾಧಿಕಾರ / ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಅಥವಾ ಅಧಿಕೃತ ಅಧಿಕಾರಿಯಿಂದ ವಿನ್ಯಾಸ ಅನುಮೋದಿಸಿರುವ ಬಗ್ಗೆ ಖಚಿತಪಡಿಸಿಕೊಂಡ ನಂತರವೇ ಖಾತಾಗಳನ್ನು ನೀಡತಕ್ಕದ್ದು.
4. ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯೊಳಗೆ, ಕಾಯ್ದೆಯಲ್ಲಿನ ಅವಕಾಶಗಳನ್ನು ಉಲ್ಲಂಘಿಸಿದ್ದಲ್ಲಿ, ಕಲಂ 17(4) ರಡಿ ಅದನ್ನು ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳುವುದು ಪ್ರಾಧಿಕಾರಗಳ ಜವಾಬ್ದಾರಿಯಾಗಿರುತ್ತದೆ.
5. ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿ ಇತರೆ ಪ್ರದೇಶಗಳಲ್ಲಿ, ಕಾಯ್ದೆಯಲ್ಲಿನ ಅವಕಾಶಗಳನ್ನು ಉಲ್ಲಂಘಿಸಿದ್ದಲ್ಲಿ,ಕಲಂ 4-K(9) ರಡಿ ಅದನ್ನು ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳುವುದು ಗ್ರಾಮ ಪಂಚಾಯಿತಿ / ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿರುತ್ತದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಅನ್ನು ಉಲ್ಲಂಘಿಸಿ ವಿನ್ಯಾಸಗಳಿಗೆ ಅನುಮೋದನೆ ನೀಡುವ ಗ್ರಾಮ ಪಂಚಾಯಿತಿ ಅಧಿಕಾರಿಗಳ ವಿರುದ್ಧ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಕಟ್ಟುನಿಟ್ಟಿನ ಕ್ರಮವನ್ನು / ಇಲಾಖಾ ವಿಚಾರಣೆಯನ್ನು / ಶಿಸ್ತುಕ್ರಮ ಕೈಗೊಳ್ಳಲಾಗುವುದು. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಅಧಿಕಾರಿಗಳು / ನೌಕರರುಗಳ ವಿರುದ್ಧ ನಗರಾಭಿವೃದ್ಧಿ ಇಲಾಖೆ ವತಿಯಿಂದ ಕಟ್ಟುನಿಟ್ಟಿನ ಕ್ರಮವನ್ನು / ಇಲಾಖಾ ವಿಚಾರಣೆಯನ್ನು / ಶಿಸ್ತುಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸತೀಶ್ ಕಬಾಡಿ
(ಸತೀಶ್ ಕಬಾಡಿ) 9-01-2024
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಪೌರಾಡಳಿತ-2 ಮತ್ತು ಮಂಡಳಿ)

ಇವರಿಗೆ:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ (ನೋಂದಣಿ ಮತ್ತು ಮುದ್ರಾಂಕ ಇಲಾಖೆ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ. ಗೋಪುರ, ಬೆಂಗಳೂರು.
5. ನೋಂದಣಿ ಮಹಾಪರಿವೀಕ್ಷಕರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ, ಬೆಂಗಳೂರು.
6. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕೆ.ಜಿ. ರಸ್ತೆ, ಗಾಂಧಿನಗರ, ಬೆಂಗಳೂರು.
7. ಮಹಾನಗರ ಆಯುಕ್ತರು, ಬಿಎಂಆರ್.ಡಿಎ., ಅಲಿ ಆಸ್ಕರ್ ರಸ್ತೆ, ಬೆಂಗಳೂರು.

8. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, (ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ)
10. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, (ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಮುಖಾಂತರ)
11. ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು / ಪೌರಾಯುಕ್ತರು / ಮುಖ್ಯಾಧಿಕಾರಿ (ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ).
12. ಪೌರಾಯುಕ್ತರು, ನೆಲಮಂಗಲ ನಗರಸಭೆ, ನೆಲಮಂಗಲ,
13. ಸದಸ್ಯ ಕಾರ್ಯದರ್ಶಿ, ನೆಲಮಂಗಲ ಯೋಜನಾ ಪ್ರಾಧಿಕಾರ, ನೆಲಮಂಗಲ.
14. ಶಾಖಾ ರಕ್ಷಕ ಕಡತ / ಕಛೇರಿ ಪ್ರತಿ.

ಸಂಖ್ಯೆ: ನಗ್ರಾಯೋ:ಜಂನಿ:87:CIRC:2023–24
ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:
ನಅಇ 93 ಎಂಡಬ್ಲ್ಯೂಪಿ 2023(ಭಾಗ–1) ಬೆಂಗಳೂರು,
ದಿನಾಂಕ:09–01–2024.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 18 JAN 2024

<u>ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.</u>

1. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
5. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
6. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
7. ಮುಖ್ಯಾಧಿಕಾರಿಗಳು/ಆಯುಕ್ತರು, ಪುರಸಭೆ/ನಗರಸಭೆ ಯೋಜನಾ ಪ್ರಾಧಿಕಾರಗಳು.
8. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಹೆಚ್ಚುವರಿ ಪ್ರತಿಗಳು.

18/01/2024

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಪರವಾಗಿ

**ಕರ್ನಾಟಕ ಸರ್ಕಾರ**

**ಸಂಖ್ಯೆ:** ನಅಇ 93 ಎಂಡಬ್ಲ್ಯೂಪಿ 2023 (ಭಾ-1)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 28.08.2024

**ಸುತ್ತೋಲೆ**

**ವಿಷಯ:** ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಅನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿಗಳಿಂದ / ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಅನುಮೋದಿಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ.

**ಉಲ್ಲೇಖ:**
1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಸುತ್ತೋಲೆ ಸಂಖ್ಯೆ: ನಗ್ರಾಯೋನಿ/ ಪರವಾನಿಗೆ/ ಸುತ್ತೋಲೆ/ 2015-16, ದಿನಾಂಕ: 22.01.2016.
2. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಸುತ್ತೋಲೆ ಸಂ. ನಗ್ರಾಯೋನಿ/ ಪರವಾನಿಗೆ/ ಸುತ್ತೋಲೆ 2015-16, ದಿನಾಂಕ: 04.05.2017.
3. ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 07 ಟಿಟಿಪಿ 2017, ದಿನಾಂಕ: 22.03.2017
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರ ಸುತ್ತೋಲೆ ಸಂಖ್ಯೆ: 23350 ಡಿಎಂಎ 121 ಜಿಪಿಎಸ್ 2017-18, ದಿನಾಂಕ: 05.01.2018.

ಸಂ: 1198
ದಿನಾಂಕ: 30/8/24

***********

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸುತ್ತೋಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ವಯ ನಗರ / ಪಟ್ಟಣಗಳಿಗೆ ಪ್ರಾಧಿಕಾರ ರಚನೆಯ ಪೂರ್ವದಲ್ಲಿ ಹಾಗೂ ರಚನೆ ನಂತರ ಭೂ ಪರಿವರ್ತನೆಯಾದ ಜಮೀನುಗಳಿಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ವಿನ್ಯಾಸ ನಕ್ಷೆ ಅನುಮೋದನೆ ಪಡೆಯದೇ ಅನಧಿಕೃತವಾಗಿ ವಿಭಜಿಸಿ, ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಬಾರದೆಂದು ನಿರ್ದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರ ಸುತ್ತೋಲೆಯಲ್ಲಿ ಗ್ರಾಮ ಠಾಣಾ ವ್ಯಾಪ್ತಿಯಲ್ಲಿನ ನಿವೇಶನಗಳಿಗೆ ಹಾಗೂ ಕರ್ನಾಟಕ ಪೌರ ಕಾಯ್ದೆ, 1964 ರ ಕಲಂ 387 ದಿನಾಂಕ:08.12.1976 ರಿಂದ ಜಾರಿಯಲ್ಲಿದ್ದು, ಸದರಿ ದಿನಾಂಕ:08.12.1976 ರ ಪೂರ್ವದಲ್ಲಿ ಭೂ ಪರಿವರ್ತನೆಯಾದ ಜಮೀನುಗಳಲ್ಲಿ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡುವ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಬಹುದಾಗಿದೆ ಎಂದು ಹಾಗೂ ದಿನಾಂಕ: 08.12.1976 ರ ಪೂರ್ವದಲ್ಲಿ ಭೂ ಪರಿವರ್ತನೆಯಾಗದ ನಿವೇಶನಗಳಿಗೆ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿದ್ದರೆ, ನಿಯಮಾನುಸಾರ ಭೂ ಪರಿವರ್ತನೆ ಆದೇಶವನ್ನು ಕಂದಾಯ ಇಲಾಖೆಯಿಂದ

ಪಡೆದುಕೊಂಡ ನಂತರ ಅಂತಹ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡಲು ತಾಂತ್ರಿಕ ಅಭಿಪ್ರಾಯ ನೀಡಬಹುದಾಗಿ ತಿಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ದಿನಾಂಕ: 22.03.2017 ರ ಸರ್ಕಾರದ ಸುತ್ತೋಲೆಯಲ್ಲಿ, ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಕಟ್ಟು ನಿಟ್ಟಿನ ಸೂಚನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ದಿನಾಂಕ: 05.01.2018ರ ಸುತ್ತೋಲೆಯಲ್ಲಿ, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯರವರು ರಾಜ್ಯದ ನಗರ ಸ್ಥಳಿಯ ಸಂಸ್ಥೆಗಳಲ್ಲಿನ ನಿಯಮ ಬಾಹಿರ ಖಾತಾ ವರ್ಗಾವಣೆಗಳನ್ನು ಗುರುತಿಸಿ, ನಿಯಮಾನುಸಾರ ರದ್ದುಪಡಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ: 19033/2023 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ನೀಡಿರುವ ದೈನಂದಿನ ಆದೇಶದಲ್ಲಿ, ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿಯಿಂದ ವಿನ್ಯಾಸ ಮಂಜೂರಾಗಿದ್ದು, ಇದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17ಕ್ಕೆ ವ್ಯತಿರಿಕ್ತವಾಗಿರುತ್ತದೆ. ಈ ಅನುಮೋದನೆಯ ವಿರುದ್ಧ ದೂರು ಸ್ವೀಕರಿಸಿದ ಹಿನ್ನಲೆಯಲ್ಲಿ ವಿನ್ಯಾಸ ನಕ್ಷೆ ಮತ್ತು ಖಾತೆಗಳನ್ನು ರದ್ದುಗೊಳಿಸಿ ಆದೇಶಿಸಲಾಗಿರುತ್ತದೆ. ಇದು, ಮೂರನೇ ವ್ಯಕ್ತಿಯ / ಖರೀದಿದಾರರ ಹಿತಾಸಕ್ತಿಗಳನ್ನು ಒಳಗೊಂಡಿದ್ದು, ಅನಾವಶ್ಯಕ ವಿವಾದಗಳಿಗೆ ಕಾರಣವಾಗುವುದರಿಂದ, ಇಂತಹ ಸಮಸ್ಯೆಗಳನ್ನು ನಿಯಂತ್ರಿಸಲು ಒಂದು ರೂಪರೇಖೆ ರಚಿಸಲು ಮಾನ್ಯ ಉಚ್ಚ ನ್ಯಾಯಾಲಯವು ಸೂಚಿಸಿರುತ್ತದೆ. ಮುಂದುವರೆದು, ಉಚ್ಚ ನ್ಯಾಯಾಲಯವು ಈ ರೀತಿಯ ಸನ್ನಿವೇಶಗಳನ್ನು ಭವಿಷ್ಯದಲ್ಲಿ ತಡೆಗಟ್ಟುವ ಬಗ್ಗೆ ವಿವರಣೆ ಕೋರಿರುತ್ತದೆ.

ಆದುದರಿಂದ, ನಗರ ಸ್ಥಳೀಯ ಸಂಸ್ಥೆಗಳು/ ಗ್ರಾಮ ಪಂಚಾಯಿತಿಗಳು ವಿನ್ಯಾಸಗಳಿಗೆ ಅನುಮೋದನೆ ನೀಡುವ ಪೂರ್ವದಲ್ಲಿ ಯೋಜನಾ ಪ್ರಾಧಿಕಾರಗಳಿಂದ / ನಗರಾಭಿವೃದ್ಧಿ ಪ್ರಾಧಿಕಾರಗಳಿಂದ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯಡಿಯಲ್ಲಿ ವಿನ್ಯಾಸ ಅನುಮೋದನೆ ಪಡೆದು ಕ್ರಮ ವಹಿಸುವ ಸಂಬಂಧ ಈ ಕೆಳಕಂಡಂತೆ ನಿರ್ದೇಶನ ನೀಡಲಾಗಿರುತ್ತದೆ:

i. **ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4(ಎ) ರಡಿ ಘೋಷಿಸಲಾದ ಸ್ಥಳೀಯ ಯೋಜನಾ ಪ್ರದೇಶದೊಳಗೆ ಕಲಂ 17 ರಡಿಯಲ್ಲಿ ಪ್ರಾಧಿಕಾರಗಳು ವಿನ್ಯಾಸ ಅನುಮೋದನೆ ಹಾಗೂ ಅಭಿವೃದ್ಧಿ ಕುರಿತು ಅನುಸರಿಸತಕ್ಕ ವಿಧಾನ:**

a) **ವಿನ್ಯಾಸ ಅನುಮೋದನೆ:**

i. ಭೂ ಮಾಲೀಕರು, ಕರ್ನಾಟಕ ಭೂ ಕಂದಾಯ ಕಾಯ್ದೆಯಡಿಯಲ್ಲಿ ಭೂ ಪರಿವರ್ತನೆ ಆದೇಶವನ್ನು ಪಡೆಯತಕ್ಕದ್ದು.

ii. ಭೂ ಮಾಲೀಕರು ಭೂ ಪರಿವರ್ತಿತ ಜಮೀನಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(1) ರಡಿ ವಿನ್ಯಾಸ ಅನುಮೋದನೆ ಕೋರಿ ಅರ್ಜಿಯನ್ನು, ಯೋಜನಾ ಪ್ರಾಧಿಕಾರ/ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

iii. ಯೋಜನಾ ಪ್ರಾಧಿಕಾರ/ ನಗರಾಭಿವೃದ್ಧಿ ಪ್ರಾಧಿಕಾರವು ಅನುಮೋದಿತ ಮಹಾಯೋಜನೆ ಹಾಗೂ ವಲಯ ನಿಯಮಾವಳಿಗಳಂತೆ ಪರಿಗಣಿಸಿ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿದ ನಂತರ ವಿನ್ಯಾಸದಲ್ಲಿನ ನಿವೇಶನಗಳನ್ನು ಬಿಡುಗಡೆಗೊಳಿಸುವ ಷರತ್ತಿಗೊಳಪಟ್ಟು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-A) ರಂತೆ ತಾತ್ಕಾಲಿಕ ವಿನ್ಯಾಸಕ್ಕೆ ಅನುಮೋದನೆ ನೀಡಿ, ಒಂದು ಪ್ರತಿಯನ್ನು ಸಂಬಂಧಿತ ಸ್ಥಳೀಯ ಸಂಸ್ಥೆಯ ಮುಂದಿನ ಕ್ರಮಕ್ಕಾಗಿ ಕಳುಹಿಸತಕ್ಕದ್ದು ಹಾಗೂ ವಿನ್ಯಾಸಕ್ಕೆ ಕಾಯ್ದೆಯ ಕಲಂ 17(2-B) ರಂತೆ ಪ್ರಾಧಿಕಾರದಿಂದ ಅಂತಿಮ ಅನುಮೋದನೆ ಪಡೆಯದೇ ವಿನ್ಯಾಸದಲ್ಲಿನ ಯಾವುದೇ ನಿವೇಶನಗಳಿಗೆ ಕಲಂ 17(2-E) ರಂತೆ ಖಾತೆ ತೆರೆಯದಂತೆ ಸ್ಥಳೀಯ ಸಂಸ್ಥೆಗೆ ಸೂಚಿಸುವುದು.

iv. ಪರ್ಯಾಯವಾಗಿ ಅರ್ಜಿದಾರರ ಕೋರಿಕೆ ಮೇರೆಗೆ, ಕಲಂ 17(2-C) ರಲ್ಲಿನ ಅವಕಾಶದಂತೆ 40:60 ಅನುಪಾತದಲ್ಲಿ ಎರಡು ಹಂತದಲ್ಲಿ ವಿನ್ಯಾಸದಲ್ಲಿನ ನಿವೇಶನ ಬಿಡುಗಡೆ ಕುರಿತು ಕಾಯ್ದೆಯನ್ವಯ ಕ್ರಮ ವಹಿಸಿ, ವಿನ್ಯಾಸದಲ್ಲಿನ ಮೊದಲನೇಯ ಹಂತದ ಶೇ.40 ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸಿ ತಾತ್ಕಾಲಿಕ ವಿನ್ಯಾಸಕ್ಕೆ ಅನುಮೋದನೆ ನೀಡಿ ಒಂದು ಪ್ರತಿಯನ್ನು ಸಂಬಂಧಿತ ಸ್ಥಳೀಯ ಸಂಸ್ಥೆಯ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಬಿಡುಗಡೆಗೊಳಿಸಿದ ನಿವೇಶನಗಳಿಗೆ ಮಾತ್ರ ಕಲಂ 17(2-E) ರಂತೆ ಖಾತೆಯನ್ನು ನೋಂದಣಿಗಾಗಿ ನೀಡಲು ಸೂಚಿಸುವುದು.

**b) ವಿನ್ಯಾಸದ ಅಭಿವೃದ್ಧಿ ಹಾಗೂ ನಿವೇಶನ ಬಿಡುಗಡೆ:**

i. ಯೋಜನಾ ಪ್ರಾಧಿಕಾರವು/ ನಗರಾಭಿವೃದ್ಧಿ ಪ್ರಾಧಿಕಾರವು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-A) ರಂತೆ ತಾತ್ಕಾಲಿಕ ಅನುಮೋದನೆ ನೀಡಿದ ವಿನ್ಯಾಸವನ್ನು ಕಲಂ 17(2-B) ರಡಿ ವಿನ್ಯಾಸದ ಅಭಿವೃದ್ಧಿ ಕಾರ್ಯವನ್ನು ಸಂಬಂಧಿತ ಸಕ್ಷಮ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಕೈಗೊಳ್ಳತಕ್ಕದ್ದು. ಕಾಯ್ದೆಯ ಕಲಂ 17(2-D) ರನ್ವಯ ನಿಗಧಿತ ಅವಧಿಯಲ್ಲಿ ಮೂಲಭೂತ ಸೌಕರ್ಯಗಳೊಂದಿಗೆ ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಖಚಿತಪಡಿಸಿಕೊಂಡು, ಕೆಳಕಂಡ ಕೋಷ್ಟಕದಲ್ಲಿ ತಿಳಿಸಿರುವಂತೆ ಸಕ್ಷಮ ಪ್ರಾಧಿಕಾರಗಳಿಂದ ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಪ್ರಮಾಣ ಪತ್ರ ಪಡೆದು, ಅಭಿವೃದ್ಧಿಪಡಿಸಿರುವ ರಸ್ತೆ, ಉದ್ಯಾನವನ / ಆಟದ ಮೈದಾನವನ್ನು ಸಂಬಂಧಿತ ನಗರ ಸ್ಥಳೀಯ ಸಂಸ್ಥೆಗೆ ಮತ್ತು ನಾಗರೀಕ ಸೌಲಭ್ಯ ನಿವೇಶನವನ್ನು ಯೋಜನಾ ಪ್ರಾಧಿಕಾರಕ್ಕೆ ಹಸ್ತಾಂತರಿಸಿದ ನಂತರ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-B) ರಂತೆ, ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಿ, ವಿನ್ಯಾಸದಲ್ಲಿನ ಶೇ.100 ರಷ್ಟು ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆಗೊಳಿಸತಕ್ಕದ್ದು.

## ಸಕ್ಷಮ ಪ್ರಾಧಿಕಾರ

| ಕಾಮಗಾರಿ | ಸಕ್ಷಮ ಪ್ರಾಧಿಕಾರ |
| --- | --- |
| ರಸ್ತೆ ಕಾಮಗಾರಿ | i. ನಗರ ಪ್ರದೇಶಗಳಲ್ಲಿ ಸಂಬಂಧಿತ ನಗರ ಸ್ಥಳೀಯ ಸಂಸ್ಥೆ<br>ii. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ |
| ನೀರು ಸರಬರಾಜು/ಒಳಚರಂಡಿ | i. ಬೆಂಗಳೂರು ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ<br>ii. ಉಳಿದ ನಗರ ಪ್ರದೇಶಗಳಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ<br>iii. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲೀಕರಣ ವಿಭಾಗ |
| ವಿದ್ಯುತ್ ಕಾಮಗಾರಿ | ಸಂಬಂಧಿತ ವಿದ್ಯುಚ್ಛಕ್ತಿ ಸರಬರಾಜು ಕಂಪನಿ (ESCOM) |

ii. ಎರಡು ಹಂತಗಳಲ್ಲಿ ನಿವೇಶನ ಬಿಡುಗಡೆ ಕೋರಿರುವ ಪ್ರಕರಣಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-C) ರಂತೆ, ತಾತ್ಕಾಲಿಕ ವಿನ್ಯಾಸ ಅನುಮೋದನೆ ದಿನಾಂಕದಿಂದ 3 ವರ್ಷಗಳೊಳಗಾಗಿ ಅಥವಾ ದಾಖಲಿಸಿದ ಕಾರಣಗಳಿಂದ ಒಂದು ವರ್ಷ ಹೆಚ್ಚುವರಿ ಅವಧಿಯಲ್ಲಿ, ವಿನ್ಯಾಸದ ಮೂಲಭೂತ ಸೌಕರ್ಯಗಳೊಂದಿಗೆ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಯೋಜನಾ ಪ್ರಾಧಿಕಾರಗಳು/ ನಗರಾಭಿವೃದ್ಧಿ ಪ್ರಾಧಿಕಾರಗಳು ಖಚಿತ ಪಡಿಸಿಕೊಳ್ಳತಕ್ಕದ್ದು. ನಿಗಧಿಪಡಿಸಿದ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಗಳಿಂದ ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಮುಕ್ತಾಯ ಪ್ರಮಾಣ ಪತ್ರ ಪಡೆದು, ಅಭಿವೃದ್ಧಿಪಡಿಸಿರುವ ರಸ್ತೆ, ಉದ್ಯಾನವನ / ಆಟದ ಮೈದಾನವನ್ನು ಸ್ಥಳೀಯ ಸಂಸ್ಥೆಗೆ ಮತ್ತು ನಾಗರೀಕ ಸೌಲಭ್ಯವನ್ನು ಯೋಜನಾ ಪ್ರಾಧಿಕಾರಕ್ಕೆ ಹಸ್ತಾಂತರಿಸಿದ ನಂತರ ಅಂತಿಮ ವಿನ್ಯಾಸಕ್ಕೆ ಅನುಮೋದನೆ ನೀಡಿ ವಿನ್ಯಾಸದಲ್ಲಿನ ಬಾಕಿ ಉಳಿದ ಎರಡನೆಯ ಹಂತದ ಶೇ.60 ರಷ್ಟು ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆಗೊಳಿಸತಕ್ಕದ್ದು.

iii. ಎರಡು ಹಂತಗಳಲ್ಲಿ ನಿವೇಶನ ಬಿಡುಗಡೆಗೆ ಕೋರಿರುವ ಪ್ರಕರಣಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-C) ರಂತೆ ವಿನ್ಯಾಸವನ್ನು ನಿಗಧಿತ ಅವಧಿಯಲ್ಲಿ ಅಭಿವೃದ್ಧಿಪಡಿಸದೇ ಇದ್ದಲ್ಲಿ, ಯೋಜನಾ ಪ್ರಾಧಿಕಾರಕ್ಕೆ ಅಭಿವೃದ್ಧಿದಾರರು / ಅರ್ಜಿದಾರಿಂದ ಅಡಮಾನ ಪಡೆದಿರುವ ಮೂಲ ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಳ್ಳತಕ್ಕದ್ದು.

c) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-E) ರಂತೆ ಸಂಬಂಧಿತ ಸ್ಥಳೀಯ ಸಂಸ್ಥೆಯು, ಅನುಮೋದನೆ ನೀಡಿರುವ ವಿನ್ಯಾಸದಲ್ಲಿ ಕರ್ನಾಟಕ

ಪೌರಸಭೆಗಳ ಕಾಯ್ದೆ, 1964, ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ಸ್ ಕಾಯ್ದೆ, 1976, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993 ಅಥವಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾಯ್ದೆ, 2020ರ ಅಡಿಯಲ್ಲಿ ಯಾವುದೇ ಖಾತೆಯನ್ನು ನೀಡತಕ್ಕದ್ದಲ್ಲ.

**d) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17ರ ಉಲ್ಲಂಘನೆ ಕುರಿತು ಕ್ರಮ:**

ಸ್ಥಳೀಯ ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17 ರಂತೆ ವಿನ್ಯಾಸ ಅನುಮೋದನೆ ಪಡೆಯದೇ ಭೂ ಅಭಿವೃದ್ಧಿ ಕೈಗೊಂಡಿರುವ ಪ್ರಕರಣಗಳಿಗೆ ಅಥವಾ ಕಾಯ್ದೆ / ನಿಯಮಗಳಿಗೆ / ವಲಯ ನಿಯಮಾವಳಿಗಳ ಅವಕಾಶಗಳಿಗೆ ವ್ಯತಿರಿಕ್ತವಾಗಿ ವಿನ್ಯಾಸದ ಅಭಿವೃದ್ಧಿ ಕೈಗೊಂಡಲ್ಲಿ, ಯೋಜನಾ ಪ್ರಾಧಿಕಾರಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(4) ರಂತೆ ನಿಯಮಾನುಸಾರ ಅಭಿವೃದ್ಧಿದಾರರು / ಅರ್ಜಿದಾರರಿಗೆ ನೋಟಿಸ್ ಜಾರಿಗೊಳಿಸಿ ಉಲ್ಲಂಘನೆಗಳನ್ನು ತೆರವುಗೊಳಿಸಲು ನಿಯಮಾನುಸಾರ ಕ್ರಮ ಜರುಗಿಸುವುದು.

ಸ್ಥಳೀಯ ಯೋಜನಾ ಪ್ರದೇಶದಲ್ಲಿನ ಗ್ರಾಮ ಪಂಚಾಯಿತಿಯು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17ನ್ನು ಉಲ್ಲಂಘಿಸಿ ಅನುಮೋದನೆಗಳನ್ನು ನೀಡಿದಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993 ರ ಕಲಂ 64 (5-A) ರನ್ವಯ ಉಲ್ಲಂಘನೆಯ ಬಗ್ಗೆ ನಿಯಮಾನುಸಾರ ಕ್ರಮ ಜರುಗಿಸಲು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಸಂಬಂಧಿತ ಸಕ್ಷಮ ಪ್ರಾಧಿಕಾರಕ್ಕೆ ದೂರು / ವರದಿಯನ್ನು ಯೋಜನಾ ಪ್ರಾಧಿಕಾರಗಳು / ನಗರಾಭಿವೃದ್ಧಿ ಪ್ರಾಧಿಕಾರಗಳು ಕ್ರಮ ವಹಿಸತಕ್ಕದ್ದು.

**II. <u>ಸ್ಥಳೀಯ ಯೋಜನಾ ಪ್ರದೇಶದ ಹೊರ ಭಾಗದಲ್ಲಿರುವ (outside LPA within the jurisdiction of Municipalities) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4-ಕೆ ರಂತೆ ವಿನ್ಯಾಸಕ್ಕೆ ತಾಂತ್ರಿಕ ಅನುಮೋದನೆ ಕುರಿತು ಅನುಸರಿಸತಕ್ಕ ವಿಧಾನ:</u>**

**ವಿನ್ಯಾಸ ಅನುಮೋದನೆ, ಅಭಿವೃದ್ಧಿ ಹಾಗೂ ನಿವೇಶನ ಬಿಡುಗಡೆ:**

i. ಭೂ ಮಾಲೀಕರು, ಕರ್ನಾಟಕ ಭೂ ಕಂದಾಯ ಕಾಯ್ದೆಯಡಿಯಲ್ಲಿ ಭೂ ಪರಿವರ್ತನೆ ಆದೇಶವನ್ನು ಪಡೆಯತಕ್ಕದ್ದು.
ii. ಭೂ ಪರಿವರ್ತನೆ ಆದೇಶದಂತೆ ಸಂಪೂರ್ಣ ವಿಸ್ತೀರ್ಣಕ್ಕೆ ವಿನ್ಯಾಸ ಅನುಮೋದನೆಗಾಗಿ ನಗರ ಸ್ಥಳೀಯ ಸಂಸ್ಥೆಗೆ (ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿಯು) ಕಾಯ್ದೆಯ ಕಲಂ 4-K(1) ರಂತೆ ಅರ್ಜಿ ಸಲ್ಲಿಸತಕ್ಕದ್ದು.

iii. ಸಂಬಂಧಿತ ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿಯು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರಕಲಂ 4-K(2) ರಡಿ ವಿನ್ಯಾಸಕ್ಕೆ ತಾಂತ್ರಿಕ ಅನುಮೋದನೆ ಕುರಿತು ಜಿಲ್ಲೆಯ ಸಂಬಂಧಪಟ್ಟ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರಿಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.

iv. ಸ್ಥಳೀಯ ಸಂಸ್ಥೆಯು ಈ ರೀತಿ ತಾಂತ್ರಿಕ ಅನುಮೋದನೆಗಾಗಿ ರವಾನಿಸಿದ ವಿನ್ಯಾಸ ಪ್ರಸ್ತಾವನೆಯ ಕುರಿತು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಅಥವಾ ಅಧೀಕರಿಸಿದ/ ಅಧಿಕಾರ ಪ್ರತ್ಯಾಯೋಜಿಸಿರುವ ಅಧಿಕಾರಿಯು (not below the rank of Assistant Director) ತಾಂತ್ರಿಕ ಅನುಮೋದನೆಯನ್ನು ನೀಡಿ ಸ್ಥಳೀಯ ಸಂಸ್ಥೆಗೆ ಮುಂದಿನ ಕ್ರಮಕ್ಕಾಗಿ ಕಳುಹಿಸತಕ್ಕದ್ದು.

v. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು ಸಲ್ಲಿಸಿರುವ ಅನುಮೋದಿತ ವಿನ್ಯಾಸವನ್ನು ಅಭಿವೃದ್ಧಿಪಡಿಸಲು ಸಂಬಂಧಿತ ಸ್ಥಳೀಯ ಸಂಸ್ಥೆಯು ಚಾಲ್ತಿ ಕಾಯ್ದೆ / ನಿಯಮ / ಸುತ್ತೋಲೆಗಳಂತೆ ಕ್ರಮ ಜರುಗಿಸಿ ವಿನ್ಯಾಸದ ಅಭಿವೃದ್ಧಿ ಕಾಮಗಾರಿಗಳನ್ನು ಕೆಳಕಂಡ ಸಕ್ಷಮ ಪ್ರಾಧಿಕಾರಗಳ ಮೇಲ್ವಿಚಾರಣೆಯಲ್ಲಿ ಕೈಗೊಂಡು ನಿಯಮಾನುಸಾರ ನಿವೇಶನಗಳನ್ನು ಬಿಡುಗಡೆಗೊಳಿಸತಕ್ಕದ್ದು.

**ಸಕ್ಷಮ ಪ್ರಾಧಿಕಾರ**

| **ಕಾಮಗಾರಿ** | **ಸಕ್ಷಮ ಪ್ರಾಧಿಕಾರ** |
|---|---|
| ರಸ್ತೆ ಕಾಮಗಾರಿ | ಸಂಬಂಧಿತ ನಗರ ಸ್ಥಳೀಯ ಸಂಸ್ಥೆ |
| ನೀರು ಸರಬರಾಜು/ ಒಳಚರಂಡಿ | i. ಬೆಂಗಳೂರು ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ<br>ii. ಉಳಿದ ನಗರ ಪ್ರದೇಶಗಳಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ |
| ವಿದ್ಯುತ್ ಕಾಮಗಾರಿ | ಸಂಬಂಧಿತ ವಿದ್ಯುಚ್ಛಕ್ತಿ ಸರಬರಾಜು ಕಂಪನಿ (ESCOM) |

~~vi. ವಿನ್ಯಾಸ ಅಭಿವೃದ್ಧಿ ಕಾರ್ಯ ಪೂರ್ಣಗೊಂಡ ನಂತರವೇ ವಿನ್ಯಾಸದ ನಿವೇಶನಗಳಿಗೆ~~ ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿಯು ಖಾತೆ ನೀಡತಕ್ಕದ್ದು.

**iii. ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ (Outside LPA within the jurisdiction of Rural Local Body) ವಿನ್ಯಾಸ ಅನುಮೋದನೆಗೆ ಅನುಸರಿಸತಕ್ಕ ವಿಧಾನ:**

**ವಿನ್ಯಾಸ ಅನುಮೋದನೆ, ಅಭಿವೃದ್ಧಿ ಹಾಗೂ ನಿವೇಶನ ಬಿಡುಗಡೆ:**

i. ಭೂಮಾಲೀಕರು, ಕರ್ನಾಟಕ ಭೂ ಕಂದಾಯ ಕಾಯ್ದೆಯಡಿಯಲ್ಲಿ ಭೂಪರಿವರ್ತನೆ ಆದೇಶವನ್ನು ಪಡೆಯತಕ್ಕದ್ದು.

ii. ಭೂ ಮಾಲೀಕರು, ಭೂ ಪರಿವರ್ತನೆ ಆದೇಶದಂತೆ ಸಂಪೂರ್ಣ ವಿಸ್ತೀರ್ಣಕ್ಕೆ ವಿನ್ಯಾಸ ಅನುಮೋದನೆಗಾಗಿ ಕಾಯ್ದೆಯ ಕಲಂ 4-K(1) ರಂತೆ ಸಂಬಂಧಿತ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸತಕ್ಕದ್ದು.

iii. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4-K ರಡಿಯಲ್ಲಿ ಒಂದು ಎಕರೆಗಿಂತ ಕಡಿಮೆ ವಿಸ್ತೀರ್ಣದ ಜಮೀನನ್ನು ಒಳಗೊಂಡಂತೆ ಎಲ್ಲಾ ಜಮೀನುಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರಿಂದ ಅಥವಾ ಅಧೀಕರಿಸಿರುವ ಅಧಿಕಾರಿಯಿಂದ ವಿನ್ಯಾಸಕ್ಕೆ ತಾಂತ್ರಿಕ ಅನುಮೋದನೆಯನ್ನು ಪಡೆಯಲು ಗ್ರಾಮ ಪಂಚಾಯಿತಿಯು ಪ್ರಸ್ತಾವನೆಗಳನ್ನು ಕಾಯ್ದೆಯ ಕಲಂ 4-K(2) ರಡಿ ಸಂಬಂಧಿತ ಜಿಲ್ಲೆಯ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

iv. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು ಯೋಜನಾ ತತ್ವಗಳಿಗನುಗುಣವಾಗಿ ಪರಿಶೀಲಿಸಿ **ಸ್ಥಳೀಯ ಯೋಜನಾ ಪ್ರದೇಶದಲ್ಲಿ ಒಳಪಡದೇ ಇರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಅನುಸರಿಸುವ ಮಾನದಂಡಗಳಂತೆ** ವಿನ್ಯಾಸಕ್ಕೆ ತಾಂತ್ರಿಕ ಅನುಮೋದನೆ ನೀಡಿ, ಸ್ಥಳೀಯ ಸಂಸ್ಥೆಗೆ ಕಳುಹಿಸತಕ್ಕದ್ದು.

v. ಸ್ಥಳೀಯ ಸಂಸ್ಥೆಯು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ತಾಂತ್ರಿಕ ಅನುಮೋದನೆ ನೀಡಿದ ವಿನ್ಯಾಸಕ್ಕೆ ಅನುಮೋದನೆ ನೀಡುವ ಬಗ್ಗೆ ಗ್ರಾಮ ಪಂಚಾಯಿತಿಯು ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯುವುದು.

vi. ಬಹು ನಿವೇಶನ ವಸತಿ / ವಸತಿಯೇತರ ವಿನ್ಯಾಸಗಳಿಗೆ, ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ತಾಂತ್ರಿಕ ಅನುಮೋದನೆ ನೀಡಲಾದ ವಿನ್ಯಾಸ ನಕ್ಷೆಯ ಮೇಲೆ ವಿನ್ಯಾಸ ನಕ್ಷೆಯನ್ನು "ನೆಲದ ಮೇಲೆ ಅಳವಡಿಸಲು ಮಾತ್ರ (for demarcation purpose only)" ಎಂದು ಷರಾ ಬರೆದು ಅರ್ಜಿದಾರರಿಗೆ ವಿನ್ಯಾಸ ನಕ್ಷೆ ರೀತಿ ನೆಲದ ಮೇಲೆ ರಸ್ತೆ ಜಾಲ, ಉದ್ಯಾನವನ / ಆಟದ ಮೈದಾನ / ಬಯಲು ಪ್ರದೇಶ ಮತ್ತು ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ಮತ್ತು ನಿವೇಶನಗಳನ್ನು ಗುರುತಿಸಲು ತಿಳಿಸತಕ್ಕದ್ದು.

vii. ವಿನ್ಯಾಸ ನಕ್ಷೆಯನ್ನು ನೆಲದ ಮೇಲೆ ಅಳವಡಿಸಿ ಗುರುತಿಸಿದ ನಂತರ, ಅಭಿವೃದ್ಧಿ ಅಧಿಕಾರಿಯು ವಿನ್ಯಾಸದಲ್ಲಿ ಕಾಯ್ದಿರಿಸಿದ ಉದ್ಯಾನವನ / ಆಟದ ಮೈದಾನ / ಬಯಲು ಪ್ರದೇಶ ನಾಗರೀಕ ಸೌಲಭ್ಯದ ಪ್ರದೇಶ ಮತ್ತು ರಸ್ತೆ ಜಾಗಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸಿಕೊಳ್ಳತಕ್ಕದ್ದು.

viii. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ತಾಂತ್ರಿಕವಾಗಿ ಅನುಮೋದನೆ ನೀಡಲಾದ ವಿನ್ಯಾಸ ನಕ್ಷೆಯಲ್ಲಿ ನೋಂದಾವಣೆಗಾಗಿ ಬಿಡುಗಡೆ ಮಾಡಬೇಕಾದ ಶೇ.60 ರಷ್ಟು ನಿವೇಶನಗಳನ್ನು ಚದುರಿದಂತೆ ಗುರುತಿಸತಕ್ಕದ್ದು.

ix. ತಾಲ್ಲೂಕು ಪಂಚಾಯಿತಿಯು ಕಾರ್ಯನಿರ್ವಹಣಾಧಿಕಾರಿಯ ವಿನ್ಯಾಸ ನಕ್ಷೆ ಮಂಜೂರಾತಿ ಆದೇಶ ಪತ್ರ, ನಕ್ಷೆಯ 3 ಪ್ರತಿಗಳು ಹಾಗೂ ಶೇ.60 ರಷ್ಟು ನಿವೇಶನಗಳನ್ನು ನೋಂದಾವಣೆಗಾಗಿ ಬಿಡುಗಡೆ ಮಾಡಿರುವ ಬಗ್ಗೆ ಪ್ರಮಾಣ

ಪತ್ರವನ್ನು ಅರ್ಜಿದಾರರಿಗೆ / ಅಭಿವೃದ್ಧಿದಾರರಿಗೆ ನೀಡತಕ್ಕದ್ದು ಹಾಗೂ ನಿವೇಶನಗಳನ್ನು ನೋಂದಾವಣೆಗಾಗಿ ಬಿಡುಗಡೆ ಮಾಡಿರುವ ಬಗ್ಗೆ ಸಂಬಂಧಪಟ್ಟ ಉಪ ನೋಂದಾವಣಾಧಿಕಾರಿಗಳ ಕಾರ್ಯಾಲಯಕ್ಕೆ ಅನುಮೋದಿತ ನಕ್ಷೆಯ ಪ್ರತಿಯೊಂದಿಗೆ ಕಳುಹಿಸತಕ್ಕದ್ದು.

x. ಸ್ಥಳೀಯ ಸಂಸ್ಥೆಯು ಸೂಚಿಸಿರುವಂತೆ ಅಭಿವೃದ್ಧಿ ಕಾಮಗಾರಿಗಳನ್ನು ನಿಗಧಿತ ಅವಧಿಯಲ್ಲಿ ಅರ್ಜಿದಾರರು / ಅಭಿವೃದ್ಧಿದಾರರು ಕೈಗೊಳ್ಳದೇ ಇದ್ದಲ್ಲಿ, ಉಳಿದಂತೆ ಶೇ.40 ರಷ್ಟು ನಿವೇಶನಗಳನ್ನು ಗ್ರಾಮ ಪಂಚಾಯಿತಿಯ ಹರಾಜಿನಲ್ಲಿ ಮಾರಾಟ ಮಾಡಿ ವಿನ್ಯಾಸ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವ ಬಗ್ಗೆ ಅಧಿಕಾರ ಇರುವ ಬಗ್ಗೆ ನೋಟರಿ ದೃಢೀಕೃತ ಮುಚ್ಚಳಿಕೆ ಪತ್ರವನ್ನು ಅರ್ಜಿದಾರರು / ಅಭಿವೃದ್ಧಿದಾರರಿಂದ ಗ್ರಾಮ ಪಂಚಾಯಿತಿಯು ಪಡೆಯತಕ್ಕದ್ದು.

xi. ಅರ್ಜಿದಾರರು/ ಅಭಿವೃದ್ಧಿದಾರರು ರಸ್ತೆ, ನೀರು ಸರಬರಾಜು, ಚರಂಡಿ, ಬೀದಿ ದೀಪಗಳ ವ್ಯವಸ್ಥೆ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು/ ಅಭಿವೃದ್ಧಿಯನ್ನು ಈ ಕೆಳಕಂಡ ಸಕ್ಷಮ ಪ್ರಾಧಿಕಾರಗಳ ಮೇಲ್ವಿಚಾರಣೆಯಲ್ಲಿ ಕೈಗೊಂಡು, ಅವರಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದು ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿಗೆ ನೀಡತಕ್ಕದ್ದು.

**ಸಕ್ಷಮ ಪ್ರಾಧಿಕಾರ**

| ಕಾಮಗಾರಿ | ಸಕ್ಷಮ ಪ್ರಾಧಿಕಾರ |
|---|---|
| ರಸ್ತೆ ಕಾಮಗಾರಿ | ಸಂಬಂಧಿತ ತಾಲ್ಲೂಕಿನ ಪಂಚಾಯತ್ ರಾಜ್ ಇಂಜಿನಿಯರಿಂಗ್ ನ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು |
| ನೀರು ಸರಬರಾಜು/ಒಳಚರಂಡಿ | ಸಂಬಂಧಿತ ತಾಲ್ಲೂಕಿನ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು |
| ವಿದ್ಯುತ್ ಕಾಮಗಾರಿ | ಸಂಬಂಧಿತ ತಾಲ್ಲೂಕಿನ ವಿದ್ಯುಚ್ಛಕ್ತಿ ಸರಬರಾಜು ಕಂಪನಿ (ESCOM) ನ ಉಪವಿಭಾಗದ ಕಾರ್ಯಪಾಲಕ ಅಭಿಯಂತರರು |

ಸ್ಥಳೀಯ ಯೋಜನಾ ಪ್ರದೇಶಕ್ಕೆ ಒಳಪಡದ ಕ್ಷೇತ್ರದಲ್ಲಿ ಗ್ರಾಮ ಪಂಚಾಯಿತಿಯು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4-K ಉಲ್ಲಂಘಿಸಿ ಅನುಮೋದನೆಗಳನ್ನು ನೀಡದಂತೆ ಸೂಚಿಸಿದೆ.

(ಸತೀಶ್ ಕಬಾಡಿ) 28.8.2024
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಪೌರಾಡಳಿತ-2 ಮತ್ತು ಮಂಡಳಿ)

28/08

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

2. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
3. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ ಗೋಪುರ, ಬೆಂಗಳೂರು.
6. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಆಯುಕ್ತರು / ಪೌರಾಯುಕ್ತರು / ಮುಖ್ಯಾಧಿಕಾರಿಗಳು ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು (ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ).
9. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು, ಗ್ರಾಮೀಣ ಸ್ಥಳೀಯ ಸಂಸ್ಥೆಗಳು – (ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ರವರ ಮುಖಾಂತರ).
10. ಆಯುಕ್ತರು / ನಗರ ಯೋಜಕ ಸದಸ್ಯರು / ಸದಸ್ಯ ಕಾರ್ಯದರ್ಶಿಗಳು ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು / ಯೋಜನಾ ಪ್ರಾಧಿಕಾರಗಳು- (ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರ ಮುಖಾಂತರ).
11. ಹೆಚ್ಚುವರಿ ನಿರ್ದೇಶಕರು / ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ವಲಯ ಕಛೇರಿಗಳು ಮತ್ತು ಎಲ್ಲಾ ಸಹಾಯಕ ನಿರ್ದೇಶಕರು, ಶಾಖಾ ಕಛೇರಿಗಳು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ- (ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರ ಮುಖಾಂತರ).
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
14. ಕಛೇರಿ ಪ್ರತಿಗಳು.

14912

ಸಂಖ್ಯೆ: ನಗ್ರಾಯೋ:ಜಂನಿ:123:CIRC:2024-25
ಸರ್ಕಾರದ ಸುತ್ತೋಲೆ ಸಂಖ್ಯೆ:
ನಅಇ 93 ಎಂಡಬ್ಲ್ಯೂಪಿ 2023 (ಭಾಗ-1)
ದಿನಾಂಕ: 28-08-2024.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
ದಿನಾಂಕ: - 3 SEP 2024

**ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.**

1. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
5. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
6. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
7. ಮುಖ್ಯಾಧಿಕಾರಿಗಳು/ಪೌರಾಯುಕ್ತರು, ಪುರಸಭೆ/ನಗರಸಭೆ/ಪಟ್ಟಣ ಪಂಚಾಯತಿ ಯೋಜನಾ ಪ್ರಾಧಿಕಾರಗಳು.
8. ಕೇಂದ್ರ ಕಛೇರಿಯ ಎಲ್ಲಾ ತಾಂತ್ರಿಕ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಹೆಚ್ಚುವರಿ ಪ್ರತಿಗಳು.



31/08/2024

ನಗರ ಮತ್ತು ಗ್ರಾಮಾಂತರ ಯೋಜನಾ
ನಿರ್ದೇಶಕರ ಪರವಾಗಿ

42 NK(Madhuri)Circ

* to be mailed to ZP also